ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಪ್ರಧಾನ ಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 27/5/2020

# 30ರಿಂದ ಮೋದಿ 2.0 ಸಾಧನಾ ಅಭಿಯಾನ

## ಕೇಂದ್ರದಲ್ಲಿ ಮೋದಿಯವರ 2ನೇ ಸರ್ಕಾರದ ಮೊದಲ ವಾರ್ಷಿಕೋತ್ಸವದ ಸಂಭ್ರಮ

ಉವಾ 27/5/20

ನವದೆಹಲಿ: ಪ್ರಧಾನಿ ನರೇಂದ್ರ ಮೋದಿಯವರು ಕೇಂದ್ರದಲ್ಲಿ ಎರಡನೇ ಬಾರಿ ಅಧಿಕಾರಕ್ಕೆ ಬಂದು ಮೇ 30ಕ್ಕೆ ಒಂದು ವರ್ಷ ಪೂರೈಸಲಿದೆ. ಹೀಗಾಗಿ ಸರ್ಕಾರದ ಸಾಧನೆಗಳನ್ನು ಜನರತ್ತ ಕೊಂಡೊಯ್ಯುವ ವಿವಿಧ ರೀತಿಯ ವಿಶೇಷ ಅಭಿಯಾನಗಳನ್ನು ಆರಂಭಿಸಲು ಬಿಜೆಪಿ ನಿರ್ಧರಿಸಿದೆ. ಮೇ 30ರಂದು ಈ ಅಭಿಯಾನಗಳಿಗೆ ಚಾಲನೆ ದೊರೆಯಲಿದೆ. 2019ರ ಮೇ 30 ರಂದು ಕೇಂದ್ರದಲ್ಲಿ ಮೋದಿ ಸರ್ಕಾರ ಸತತ ಎರಡನೇ ಬಾರಿಗೆ ಅಸ್ತಿತ್ವಕ್ಕೆ ಬಂದಿತ್ತು.

- ದೇಶಾದ್ಯಂತ 750 ವಿಶೇಷ ರ್‍ಯಾಲಿಗಳನ್ನು ಆಯೋಜಿಸಲು ತೀರ್ಮಾನ
- ರಾಷ್ಟ್ರ, ರಾಜ್ಯಗಳ ಬಿಜೆಪಿ ನಾಯಕರಿಗಾಗಿ 1,000 ವರ್ಚುವಲ್ ವಿಡಿಯೋ ಕಾನ್ಫರೆನ್ಸ್
- ಮನೆಮನೆಗಳಿಗೆ ಮೋದಿ ಹಸ್ತಾಕ್ಷರದಲ್ಲಿ ಸಾಧನೆಗಳ ವಿವರಣಾ ಪತ್ರ ಕಳಿಸಲು ಪ್ಲಾನ್

ಮೋದಿಯವರ ಸರ್ಕಾರದ ಸಾಧನೆಯನ್ನು ಜನರಿಗೆ ತಲುಪಿಸುವ ಸಲುವಾಗಿ, ದೇಶಾದ್ಯಂತ 750 ವಿಶೇಷ ರ್‍ಯಾಲಿಗಳನ್ನು ನಡೆಸಲು ನಿರ್ಧರಿಸಲಾಗಿದೆ. ಲಾಕ್‌ಡೌನ್ ನಿಬಂಧನೆಗಳನ್ನು ಮೀರದಂತೆ ಈ ರ್‍ಯಾಲಿಗಳನ್ನು ನಡೆಸಲಾಗುತ್ತದೆ. ಅವುಗಳ ಜೊತೆಗೆ 1,000 ವರ್ಚ್ಯುವಲ್ ವಿಡಿಯೋ ಕಾನ್ಫರೆನ್ಸ್‌ಗಳನ್ನು ನಡೆಸಲು ನಿರ್ಧರಿಸಲಾಗಿದೆ. ಅದರಲ್ಲಿ ರಾಷ್ಟ್ರ ಮಟ್ಟದ ಹಾಗೂ ವಿವಿಧ ರಾಜ್ಯಗಳ ಬಿಜೆಪಿ ನಾಯಕರು ಪಾಲ್ಗೊಳ್ಳಲಿದ್ದಾರೆ. ಇದಲ್ಲದೆ, ಮೋದಿಯವರ 2ನೇ ಅವಧಿಯ ಸರ್ಕಾರದ ಸಾಧನೆಗಳ ಬಗ್ಗೆ ವಿಡಿಯೋ ಸಾಕ್ಷ್ಯಚಿತ್ರವೊಂದನ್ನು ಬಿಡುಗಡೆ ಮಾಡಲೂ ತೀರ್ಮಾನಿಸಲಾಗಿದೆ.

**ಮನೆಮನೆಗೆ ಪತ್ರ:** ದೇಶದ 10 ಕೋಟಿ ಮನೆಗಳಿಗೆ ಮೋದಿಯವರ ಹಸ್ತಾಕ್ಷರದಲ್ಲಿ ಬರೆಯಲಾಗಿರುವ ಪತ್ರಗಳನ್ನು ರವಾನಿಸಲು ತೀರ್ಮಾನಿಸಲಾಗಿದೆ. ಅದರಲ್ಲಿ, ಭಾರತವನ್ನು ಸ್ವಾವಲಂಬಿ ರಾಷ್ಟ್ರವನ್ನಾಗಿಸುವಲ್ಲಿ ಕೈಗೊಳ್ಳಲಾಗಿರುವ ಕ್ರಮಗಳು, ಯೋಜನೆಗಳ ಬಗ್ಗೆ ಮಾಹಿತಿ ನೀಡಲಾಗಿರುತ್ತದೆ. ಅದೇ ಪತ್ರದಲ್ಲಿ, ಕೊರೊನಾವನ್ನು ತಡೆಗಟ್ಟಲು ಕೇಂದ್ರ ಕೈಗೊಂಡ ಕ್ರಮಗಳ ಬಗ್ಗೆಯೂ ವಿವರಿಸಲಾಗುತ್ತದೆ.

### ಸುವರ್ಣಾಕ್ಷರದ ಸಾಧನೆ



ಕಾಶ್ಮೀರದ ವಿಶೇಷ ಸ್ಥಾನಮಾನಕ್ಕೆ ಕಾರಣವಾಗಿದ್ದ ಸಂವಿಧಾನದ 370ನೇ ಕಲಂ ತಿದ್ದುಪಡಿ ಮಾಡಿ ಆ ರಾಜ್ಯವನ್ನು ಎರಡು ಕೇಂದ್ರಾಡಳಿತ ಪ್ರದೇಶಗಳನ್ನಾಗಿ ವಿಂಗಡಿಸಿದ್ದು, ತ್ರಿವಳಿ ತಲಾಖ್ ಅನ್ನು ಕಾನೂನು ಬಾಹಿರವೆಂದು ಘೋಷಿಸಿದ್ದು, ರಾಮಜನ್ಮಭೂಮಿ ವಿವಾದ ಸುಖಾಂತ್ಯಗೊಳಿಸಿ ಅಲ್ಲಿ ರಾಮಮಂದಿರ ನಿರ್ಮಾಣಕ್ಕೆ ಅನುವು ಮಾಡಿಕೊಟ್ಟದ್ದು ಮೋದಿಯವರ 2ನೇ ಅವಧಿಯ ಸರ್ಕಾರದ ಅತಿ ಮಹತ್ವದ ಸಾಧನೆಗಳಾಗಿವೆ. ಈ ಸಾಧನೆಗಳನ್ನು ಇತಿಹಾಸದ ಪುಟಗಳಲ್ಲಿ ಸುವರ್ಣಾಕ್ಷರಗಳಲ್ಲಿ ಬರೆದಿಡಲಾಗುತ್ತದೆ ಎಂದು ಬಿಜೆಪಿ ಹೇಳಿದೆ. ಇದೇ ಅವಧಿಯಲ್ಲಿ ವಿಶ್ವದ ಅತಿ ವಿಖ್ಯಾತ ಜನನಾಯಕ ಎಂಬ ಹೆಗ್ಗಳಿಕೆಯನ್ನು ಮೋದಿಯವರು ಪಡೆದಿದ್ದು, ಈ ದೇಶದ ಜನತೆಯ ಆಶೋತ್ತರಗಳಿಗೆ ಅನುಗುಣವಾಗಿ ದೇಶವನ್ನು ಮುನ್ನಡೆಸುತ್ತಿದ್ದಾರೆ ಎಂದು ಪಕ್ಷ ತಿಳಿಸಿದೆ.